# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:12ನೇ ಆಗಸ್ಟ್, 2025**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

## 02. ಶೂನ್ಯವೇಳೆ ಪ್ರಸ್ತಾವಗಳು

## 03. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮಂಜುನಾಥ್ ಭಂಡಾರಿ ಹಾಗೂ ಶ್ರೀ ಡಿ.ಎಸ್. ಅರುಣ್** ಅವರುಗಳು ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ ಶೀಘ್ರವಾಗಿ ಚುನಾವಣೆ ನಡೆಸುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

02. **ಶ್ರೀ ವೈ.ಎಂ. ಸತೀಶ್** ಅವರು ಬಳ್ಳಾರಿ ನಗರದಲ್ಲಿರುವ ತಾರಾನಾಥ ಆಯುರ್ವೇದ ಕಾಲೇಜಿನಲ್ಲಿನ ಬೋಧಕ ಹುದ್ದೆಗಳು ಖಾಲಿ ಇರುವುದರಿಂದ, ಭಾರತೀಯ ವೈದ್ಯಕೀಯ ರಾಷ್ಟ್ರೀಯ ಆಯೋಗವು ವಿದ್ಯಾರ್ಥಿಗಳ ಪ್ರವೇಶವನ್ನು ಕಡಿಮೆ ಮಾಡಲು ಶಿಫಾರಸ್ಸು ಮಾಡಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

03. **ಡಾ: ಧನಂಜಯ ಸರ್ಜಿ** ಅವರು ರಾಜ್ಯದಲ್ಲಿ ಪದವಿ ಮತ್ತು ಉನ್ನತ ವ್ಯಾಸಂಗದ ಕೋರ್ಸುಗಳ ಪಠ್ಯಕ್ರಮವನ್ನು ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಾದ ಯು.ಪಿ.ಎಸ್.ಸಿ, ಎಸ್.ಎಸ್.ಸಿ ಹಾಗೂ ಇನ್ನಿತರೆ ನೇಮಕಾತಿಗಳಿಗೆ ಅನುಕೂಲವಾಗುವಂತೆ ಪರಿಷ್ಕೃತಗೊಳಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

01. **ಶ್ರೀ ಪ್ರತಾಪಸಿಂಹ ನಾಯಕ್ ಕೆ.** ಅವರು ರಾಜ್ಯದಲ್ಲಿ ಅಡಿಕೆ ತೋಟಗಳಲ್ಲಿ ಕಾಣಿಸಿಕೊಂಡಿರುವ ಕೊಳೆ ರೋಗದಿಂದಾಗಿ ಅಡಿಕೆ ಬೆಳೆಗಾರರು ಸಂಕಷ್ಟಕ್ಕೀಡಾಗಿರುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು)

..2..

೦2. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸಲು ವಶಪಡಿಸಿಕೊಳ್ಳಲಾದ ಜಮೀನುಗಳಿಗೆ ಭೂ ಪರಿಹಾರ ಪಾವತಿಯನ್ನು ಬಟವಾಡೆ ಮಾಡುವಾಗ ಉಂಟಾಗಿರುವ ಲೋಪದೋಷಗಳ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಚರ್ಚೆ

**ಶ್ರೀಯುತರುಗಳಾದ:-**

| | |
|---|---|
| **ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ನಾಯಕರು, ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಶಾಸಕರುಗಳಾದ ಶಶೀಲ್ ಜಿ. ನಮೋಶಿ, ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ, ಹಾಗೂ ಇತರರು** | ಬೆಂಗಳೂರಿನ ಕಾಡುಗೋಡಿ ಪ್ಲಾಂಟೇಷನ್ ಪ್ರದೇಶದಲ್ಲಿರುವ ಕೃಷಿ ಭೂಮಿಯನ್ನು ಅರಣ್ಯ ಭೂಮಿಯೆಂದು ಗುರುತಿಸಿರುವ ಕುರಿತು |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**